# ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು

(ಕರ್ನಾಟಕ ಸರ್ಕಾರದ ಅಧೀನದ ಸ್ವಾಯತ್ತ ಸಂಸ್ಥೆ)

**ವಿಕ್ಟೋರಿಯಾ ಆಸ್ಪತ್ರೆ ಆವರಣ, ಕೋಟೆ, ಬೆಂಗಳೂರು –560 002.**

gdcribangalore@gmail.com


ಸಂಖ್ಯೆ:ಸದಂಕಾಸಂಸಂ/ ಸಿ(1)/09/2014–15 ನಿರ್ದೇಶಕರು ಮತ್ತು ಡೀನ್ ರವರ ಕಾರ್ಯಾಲಯ,

ದಿನಾಂಕ: 07-09-2016

## ಅಧಿಸೂಚನೆ

ವಿಷಯ:– ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಈ ಸ್ವಾಯತ್ತ ಸಂಸ್ಥೆಯಲ್ಲಿ ಫೋರೆನ್ಸಿಕ್ ಓಡೋಂಟಾಲಜಿ ವಿಭಾಗದ ಸಹ ಪ್ರಾಧ್ಯಾಪಕರ ಹುದ್ದೆಗೆ ನೇಮಕಾತಿ ಮಾಡುವ ಬಗ್ಗೆ–ಅಂತಿಮ ಆಯ್ಕೆ ಪಟ್ಟಿ

ಉಲ್ಲೇಖ:–
1. ಸರ್ಕಾರದ ಆದೇಶ ಸಂಖ್ಯೆ:ಆಕುಕ 57 ಆರ್‌ಜಿಯು 2015, ಬೆಂಗಳೂರು ದಿನಾಂಕ:15.04.2016
2. ಈ ಸಂಸ್ಥೆಯ ಅಧಿಸೂಚನೆ ಸಂಖ್ಯೆ:ಸದಂಕಾಸಂಸಂ/ಸಿ(1)/09/2014–15 ದಿನಾಂಕ:22.07.2016
3. ಆಯ್ಕೆ ಸಮಿತಿ ಸಭೆ ನಡವಳಿ ದಿನಾಂಕ:01.08.2016
4. ತಾತ್ಕಾಲಿಕ ಆಯ್ಕೆ ಪಟ್ಟಿಯ ಅಧಿಸೂಚನೆ ದಿನಾಂಕ:05.08.2016

-------

ಉಲ್ಲೇಖ(1)ರ ಸರ್ಕಾರಿ ಪತ್ರ ಹಾಗೂ ಸಂಸ್ಥೆಯ ದಿನಾಂಕ:23.05.2016ರಂದು ನಡೆದ 15ನೇ ಆಡಳಿತ ಪರಿಷತ್ ಸಭೆಯ ನಿರ್ಣಯದನ್ವಯ ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಈ ಸ್ವಾಯತ್ತ ಸಂಸ್ಥೆಯಲ್ಲಿ ಖಾಲಿಯಿರುವ 01 ಸಹ ಪ್ರಾಧ್ಯಾಪಕರ ಹುದ್ದೆಗೆ ರೂ.37400-67000+9000 AGPಗಳಲ್ಲಿ ವೇತನ ಶ್ರೇಣಿಯಲ್ಲಿ ಭರ್ತಿ ಮಾಡುವ ಸಲುವಾಗಿ ಉಲ್ಲೇಖ(2)ರ ದಿನಾಂಕ:22.07.2016ರ ಅಧಿಸೂಚನೆಯಲ್ಲಿ ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಅರ್ಹ ಅಭ್ಯರ್ಥಿಗಳಿಗೆ ದಿನಾಂಕ:01.08.2016ರಂದು ಸಂದರ್ಶನ ನಡೆಸಲಾಯಿತು. ಸಂದರ್ಶನಕ್ಕೆ ಗರಿಷ್ಠ 15 ಅಂಕಗಳನ್ನು ನಿಗದಿ ಮಾಡಲಾಗಿತ್ತು. ವಿದ್ಯಾರ್ಹತೆಯಲ್ಲಿ ಪಡೆದಿರುವ ಅಂಕಗಳ ಶೇಕಡವಾರನ್ನು ಶೇಕಡಾ 85ಕ್ಕೆ ಲೆಕ್ಕಾಚಾರ ಮಾಡಿ ಮತ್ತು ಸಂದರ್ಶನದಲ್ಲಿ ಪಡೆದ ಅಂಕಗಳನ್ನು ಒಟ್ಟುಗೂಡಿಸಿ ಮೆರಿಟ್ ಪಟ್ಟಿಯನ್ನು ತಯಾರಿಸಿ ಅದೇ ದಿನ ಪ್ರಕಟಿಸಲಾಗಿರುತ್ತದೆ.

ಉಲ್ಲೇಖ(4)ರ ದಿನಾಂಕ:05.08.2016ರಂದು ಈ ಕಛೇರಿಯ ಅಧಿಸೂಚನೆಯಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಿ, ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಯಿಂದ ಬಾಧಿತವಾಗಿರುವ ಅಭ್ಯರ್ಥಿಗಳಿದ್ದರೆ ಆಕ್ಷೇಪಣೆ/ಮನವಿಗಳನ್ನು ಸಮರ್ಪಕವಾದ ದಾಖಲಾತಿಗಳೊಂದಿಗೆ ಈ ಅಧಿಸೂಚನೆ ಪ್ರಕಟವಾದ 1 ವಾರದೊಳಗೆ ಸಂಸ್ಥೆಯ ನಿರ್ದೇಶಕರು ಸಲ್ಲಿಸುವಂತೆ ಸೂಚಿಸಲಾಗಿತು.

ಸದರಿ ಸಹ ಪ್ರಾಧ್ಯಾಪಕರ ತಾತ್ಕಾಲಿಕ ಪಟ್ಟಿಗೆ ನಿಗದಿತ ಅವಧಿಯೊಳಗೆ ಸ್ವೀಕೃತವಾಗಿದ್ದು ಆಕ್ಷೇಪಣೆಗಳನ್ನು ಪರಿಶೀಲಿಸಿ ಸದರಿ ಆಕ್ಷೇಪಣೆಗಳು ಅರ್ಜಿಗಳನ್ನು ಪರಿಗಣಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಅದರಂತೆ ಅರ್ಜಿದಾರರಿಗೆ ಸೂಕ್ತ ಹಿಂಬರಹ ನೀಡಲಾಗಿರುತ್ತದೆ.

ಮೀಸಲಾತಿ ಮತ್ತು ಮೆರಿಟ್‌ನ ಆಧಾರದ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಈ ಕೆಳಕಂಡಂತೆ ತಯಾರಿಸಿ ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಹಾಗೂ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.